**Tuesday 26th April 2022, Page No.05**

# Karnataka State Open University 17th Convocation Ceremony: Honorary Doctorate Degree RSST Hon. Sec.A.V.S. Murthy

ವಿಶ್ವವಾಣಿ

### ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ 17ನೇ ಘಟಿಕೋತ್ಸವ

## ಉತ್ಕೃಷ್ಟ ಭಾರತ ನಿರ್ಮಾಣಕ್ಕೆ ಪ್ರತಿಯೊಬ್ಬರ ಸಹಕಾರ ಅಗತ್ಯ




ಎ.ವಿ.ಎಸ್.ಮೂರ್ತಿ, ಇ.ಎಸ್.ಚಕ್ರವರ್ತಿ, ಆನಂದ ಸಂಕೇಶ್ವರ ಅವರಿಗೆ ಗೌರವ ಡಾಕ್ಟರೇಟ್ ಪ್ರದಾನ ಮಾಡಲಾಯಿತು.

### 8,338 ಅಭ್ಯರ್ಥಿಗಳಿಗೆ ಪದವಿ ಪ್ರದಾನ

2018-19 ಮತ್ತು 2019-20ರ ಬ್ಯಾಚ್‌ನ 8,338 ಅಭ್ಯರ್ಥಿಗಳಿಗೆ ಸ್ನಾತಕ ಹಾಗೂ ಸ್ನಾತಕೋತ್ತರ ಪದವಿ ಪ್ರದಾನ ಮಾಡಲಾಯಿತು. 48 ಚಿನ್ನದ ಪದಕ, 38 ನಗದು ಬಹುಮಾನಗಳನ್ನು ನೀಡಲಾಯಿತು. 31 ಅಭ್ಯರ್ಥಿಗಳಿಗೆ ಪಿಎಚ್.ಡಿ ಪದವಿ ಪ್ರದಾನ ಮಾಡಲಾಯಿತು.

**ಮೈಸೂರು:** ಪ್ರತಿ ಪ್ರಜೆಯೂ ತನ್ನ ಜವಾಬ್ದಾರಿಯನ್ನು ಅರಿತು ಕೆಲಸ ನಿರ್ವಹಿಸಿದಾಗ ಮಾತ್ರ ಉತ್ಕೃಷ್ಟ ಹಾಗೂ ಶ್ರೇಷ್ಠ ಭಾರತವನ್ನು ಕಟ್ಟಲು ಸಾಧ್ಯ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹಲೋತ್ ಹೇಳಿದರು.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ 17ನೇ ಘಟಿಕೋತ್ಸವದಲ್ಲಿ ಭಾಗವಹಿಸಿ ಮಾತನಾಡಿದ ಅವರು, ವಿಶ್ವವಿದ್ಯಾನಿಲಯವು ಸಾಮರ್ಥ್ಯ, ರಾಷ್ಟ್ರೀಯ ಜವಾಬ್ದಾರಿಯ ಜತೆಗೆ ಎಲ್ಲರಿಗೂ ಎಲ್ಲ ಕಡೆಯಲ್ಲೂ ಉನ್ನತ ಶಿಕ್ಷಣವನ್ನು ನೀಡುತ್ತಿರುವುದು ಪ್ರಶಂಸನೀಯ. ಗುರುಗಳ ಮಾರ್ಗದರ್ಶನ, ತಂದೆ- ತಾಯಿ, ಪರಿವಾರ ಸಹಯೋಗದಿಂದ ವಿದ್ಯಾರ್ಥಿಗಳು ಸಾಧನೆಯ ಗುರಿ ತಲುಪಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಸಮಾಜ ಮುಖಿಯಾಗಿ ಕಾರ್ಯನಿರ್ವಹಿಸಿ ಸಮಾಜ ಹಾಗೂ ಪೋಷಕರಿಗೆ ಗೌರವ ತಂದು ಕೊಡಬೇಕು ಎಂದು ತಿಳಿಸಿದರು.

### ಮೂವರಿಗೆ ಗೌರವ ಡಾಕ್ಟರೇಟ್

ಬೆಂಗಳೂರಿನ ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್, ಆರ್.ವಿ.ಸಮೂಹ ಶಿಕ್ಷಣ ಸಂಸ್ಥೆಗಳ ಕಾರ್ಯದರ್ಶಿ ಎ.ವಿ.ಎಸ್.ಮೂರ್ತಿ, ಟಿಸಿಎಸ್ ಉಪಾಧ್ಯಕ್ಷ ಇ.ಎಸ್.ಚಕ್ರವರ್ತಿ ಹಾಗೂ ವಿಆರ್‌ಎಲ್ ಸಮೂಹ ಸಂಸ್ಥೆ ವ್ಯವಸ್ಥಾಪಕ ನಿರ್ದೇಶಕ ಆನಂದ ಸಂಕೇಶ್ವರ ಅವರಿಗೆ ಗೌರವ ಡಾಕ್ಟರೇಟ್ ಪ್ರದಾನ ಮಾಡಲಾಯಿತು.

ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ನಿರ್ದೇಶಕ (ತಾಂತ್ರಿಕ) ಎ.ಬಿ ಬಸವರಾಜು ಘಟಿಕೋತ್ಸವ ಭಾಷಣ ಮಾಡಿದರು. ಕೆಎಸ್‌ಒಯು ಕುಲಪತಿ ಡಾ.ಎಸ್.ವಿದ್ಯಾಶಂಕರ್, ಕುಲಸಚಿವ ಡಾ.ಆರ್.ರಾಜಣ್ಣ ಪಾಲ್ಗೊಂಡರು.